ಕರ್ನಾಟಕ ವಿಧಾನ ಸಭೆ

ಗುರುವಾರ 29 ನೇ ಡಿಸೆಂಬರ್ 94 ರಂದು ಸದನವು ವಿಧಾನ ಸೌಧದಲ್ಲಿರುವ ವಿಧಾನ ಸಭೆಯ ಸಭಾಂಗಣದಲ್ಲಿ ಬೆಳಿಗ್ಗೆ 11-15 ಗಂಟೆಗೆ ಸಮಾವೇಶಗೊಂಡಿತು.

ಅಧ್ಯಕ್ಷರು: ಶ್ರೀ ರಮೇಶ್ ಕುಮಾರ್ ಅವರು ಪೀಠವನ್ನು ಅಲಂಕರಿಸಿದ್ದರು.

I. ಶ್ರೀ ಹೆಚ್.ಡಿ. ದೇವೇಗೌಡ (ಮುಖ್ಯ ಮಂತ್ರಿ) ಮಾನ್ಯ ಅಧ್ಯಕ್ಷರೆ,

1978ನೇ ಇಸವಿಯ ಕರ್ನಾಟಕ ರಾಜ್ಯ ನಾಗರೀಕ ಸೇವಾ ಅಧಿನಿಯಮದ 8(3)ನೇ ಕಲಮಿನ ಮೇರೆಗೆ;

1. ಕರ್ನಾಟಕ ರಾಜ್ಯ ಕೃಷಿ ಇಲಾಖೆಯ ಶೀಘ್ರಲಿಪಿಗಾರರಿಗೆ ಪದೋನ್ನತಿ ನೀಡಲು ಕೃಷಿ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳು 1976ಕ್ಕೆ ತಿದ್ದುಪಡಿ ಮಾಡುವ ಸಂಬಂಧದಲ್ಲಿ ದಿನಾಂಕ 31.8.1994 ರಂದು ಹೊರಡಿಸಲಾದ ಸಿಆಸುಇ 1 ಸೇನಿಇ 93ನೇ ಕ್ರಮಾಂಕದ ಅಧಿಸೂಚನೆ;

2. ಕರ್ನಾಟಕ ಲೋಕೋಪಯೋಗಿ ಇಂಜಿನಿಯರಿಂಗ್ ಇಲಾಖಾ ಸೇವೆಗಳು (ನೇಮಕಾತಿ) ನಿಯಮಗಳು 1988ಕ್ಕೆ ತಿದ್ದುಪಡಿ ಮಾಡುವ ಸಂಬಂಧದಲ್ಲಿ ದಿನಾಂಕ 19.10.1994 ರಂದು ಹೊರಡಿಸಲಾದ ಸಿಆಸುಇ 2 ಸೇನಿಡಿ 94ನೇ ಕ್ರಮಾಂಕದ ಅಧಿಸೂಚನೆ;

3. ಕರ್ನಾಟಕ ಲೋಕೋಪಯೋಗಿ (ನೀರಾವರಿ ಸೇವೆಗಳು) (ನೇಮಕಾತಿ) ನಿಯಮಗಳು 1988ಕ್ಕೆ ತಿದ್ದುಪಡಿ ಮಾಡುವ ಸಂಬಂಧದಲ್ಲಿ ದಿನಾಂಕ 19.10.1994 ರಂದು ಹೊರಡಿಸಲಾದ ಸಿಆಸುಇ 5 ಎಸ್ಆರ್ಡಿ 94ನೇ ಕ್ರಮಾಂಕದ ಅಧಿಸೂಚನೆ;

1976ರ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಧಿನಿಯಮದ 47(5)ನೇ ಕಲಮಿನ ಮೇರೆಗೆ;

4. 1988-89ನೇ ಸಾಲಿನ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಪ್ರಮಾಣೀಕೃತ ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧನಾ ವರದಿಗಳನ್ನು ಮಂಡಿಸುತ್ತೇನೆ.

II. ಶ್ರೀ ಜೆ.ಹೆಚ್. ಪಟೇಲ್ (ಉಪ ಮುಖ್ಯ ಮಂತ್ರಿ) ಮಾನ್ಯ ಅಧ್ಯಕ್ಷರೆ,

1956ರ ಕಂಪನಿಗಳ ಕಾಯ್ದೆಯ 619ಎ ಕಲಮಿನ ಮೇರೆಗೆ;

1988-89ನೇ ಸಾಲಿನ ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ ನಿಯಮಿತದ 19ನೇ ವಾರ್ಷಿಕ ವರದಿಯನ್ನು ಮಂಡಿಸುತ್ತೇನೆ.

III. ಶ್ರೀ ಆರ್.ಎಲ್. ಜಾಲಪ್ಪ (ಕಂದಾಯ ಮಂತ್ರಿ) ಮಾನ್ಯ ಅಧ್ಯಕ್ಷರೆ,

1964ನೇ ಸಾಲಿನ ಕರ್ನಾಟಕ ಭೂ ಕಂದಾಯ ನಿಯಮದ ಪ್ರಕರಣ 194 (2)ನೇ ಕಲಮಿನ ಮೇರೆಗೆ;

1. ಧಾರಾವಾಡ ಜಿಲ್ಲೆಯ ಶಿರಹಟ್ಟಿ ತಾಲ್ಲೂಕಿನ 8 ಗ್ರಾಮಗಳ 1990-91ನೇ ಸಾಲಿನ ಭೂ ಕಂದಾಯ 22,834.17ರೂ.ಗಳನ್ನು ಮನ್ನಾ ಮಾಡುವ ಸಂಬಂಧದಲ್ಲಿ ದಿನಾಂಕ 26.9.1994 ರಂದು ಹೊರಡಿಸಲಾದ ಆರ್ಡಿ 294 ಟಿಆರ್ಎಂ 94ನೇ ಕ್ರಮಾಂಕದ ಅಧಿಸೂಚನೆ;

2. ಬೆಳಗಾವಿ ಜಿಲ್ಲೆಯ ಸವದತ್ತಿ ತಾಲ್ಲೂಕಿನ 15 ಗ್ರಾಮಗಳ 1974-75ನೇ ಸಾಲಿನ ಭೂ ಕಂದಾಯ 13,849.43ರೂ.ಗಳನ್ನು ಮನ್ನಾ ಮಾಡುವ ಸಂಬಂಧದಲ್ಲಿ ದಿನಾಂಕ 26.9.1994 ರಂದು ಹೊರಡಿಸಲಾದ ಆರ್ಡಿ 296 ಟಿಆರ್ಎಂ 94ನೇ ಕ್ರಮಾಂಕದ ಅಧಿಸೂಚನೆ;